ಶ್ರೀ ಜಗದೀಶ್ ಶೆಟ್ಟರ್ : ಮಾನ್ಯ ಅಧ್ಯಕ್ಷರೇ, ನಾನು ನಿಲುವಳಿ ಸೂಚನೆ ಕಳುಹಿಸಿದ್ದೆ. ಅದರ ಬಗ್ಗೆ ತಾವೂ ಏನು ಹೇಳಲಿಲ್ಲ.

ಅಧ್ಯಕ್ಷರು : ತಾವು ಕಳುಹಿಸಿದ ನಿಲುವಳಿ ಸೂಚನೆಯನ್ನು ನಾನು ನಿಯಮ 69ಕ್ಕೆ ಕನ್‌ವರ್ಟ್ ಮಾಡಿದ್ದೇನೆ. ಅದರ ಬಗ್ಗೆ ನಾಳೆ ನಾವು ಕುಳಿತುಕೊಂಡು ಮಾತನಾಡಿ ನಾಳೆ ತೆಗೆದುಕೊಳ್ಳೋಣ.

(ಇ) ವಿಷಯ : ತರೀಕೆರೆ ತಾಲ್ಲೂಕಿನ ಕುಂದು ಮಳೆ ಗ್ರಾಮದಲ್ಲಿ ವಾಂತಿ ಭೇದಿಯಿಂದ ಜನ ನರಳುತ್ತಿರುವುದು.

ಶ್ರೀ ಬಿ.ಆರ್. ನೀಲಕಂಟಪ್ಪ : ಮಾನ್ಯ ಅಧ್ಯಕ್ಷರೇ, ಶೂನ್ಯ ವೇಳೆ ಮಾನ್ಯ ಅಧ್ಯಕ್ಷರೇ, ನಾನು ಈ ಹಿಂದೆ ಒಂದು ಪ್ರಶ್ನೆ ಕೇಳಿದ್ದೆ. ನಮ್ಮ ತರೀಕೆರೆ ತಾಲ್ಲೂಕು ಕುಂದುಮಳೆ ಇಡೀ ಗ್ರಾಮದಲ್ಲಿ ವಾಂತಿ ಭೇದಿಯಿಂದ ಜನ ನರಳುತ್ತಿದ್ದಾರೆ. ಒಂದು ವಾರದಿಂದ ಪರಿಸ್ಥಿತಿ ಬಿಗಡಾಯಿಸಿದೆ. ಜನರನ್ನು ಆಸ್ಪತ್ರೆಗೆ ಸೇರಿಸುತ್ತಿದ್ದಾರೆ.

ಅಧ್ಯಕ್ಷರು : ತಮ್ಮ ವಿಷಯವೂ ಅಷ್ಟೇ. ಬೇಡಿಕೆಗಳು ಮೊದಲು ಮುಗಿಯಲಿ ಪ್ರಶ್ನೋತ್ತರ ವೇಳೆ ಬರುತ್ತದೆ. ಅದು ಮುಗಿದ ನಂತರ ತಾವು ಪ್ರಸ್ತಾಪ ಮಾಡಬಹುದು. ಈಗ ಬೇಡ. ಈಗ ಬೇಡಿಕೆ ಸಂಖ್ಯೆ 26.

4) ವಿತ್ತೀಯ ಕಾರ್ಯಕಲಾಪಗಳು

ಅ) 2002-2003ನೇ ಸಾಲಿನ ಅನುದಾನ ಬೇಡಿಕೆಗಳ ಮಂಡನೆ ಮತ್ತು ಚರ್ಚೆ ಹಾಗೂ ಸರ್ಕಾರದಿಂದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಬೇಡಿಕೆ ಸಂಖ್ಯೆ : 29

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು): ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜ್ಯಸ್ವ ಖಾತೆಯಲ್ಲಿ 32,365,37 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 530.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಕೇಳಿಕೊಳ್ಳುತ್ತೇನೆ.

ಬೇಡಿಕೆ ಸಂಖ್ಯೆ : 30

ಶ್ರೀ ಕೆ.ಹೆಚ್. ರಂಗನಾಥ್ (ಮಾನ್ಯ ಅರಣ್ಯ ಸಚಿವರು) : ಮಾನ್ಯ ಅಧ್ಯಕ್ಷರೇ ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಅರಣ್ಯ ಜೀವಪರಿಸ್ಥಿತಿ ಶಾಸ್ತ್ರ ಮತ್ತು ಪರಿಸರ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವಖಾತೆಯಲ್ಲಿ 30.100.25 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,035.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಕೇಳಿಕೊಳ್ಳುತ್ತೇನೆ.